## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** 2020-21ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (PMKSY-OI-PDMC) ಯೋಜನೆಗೆ 2019-20ನೇ ಸಾಲಿನಲ್ಲಿ ರಾಜ್ಯದಿಂದ ಬಿಡುಗಡೆಯಾಗದೇ ಬಾಕಿ ಉಳಿದ ಅನುದಾನವನ್ನು ಮರುಮೌಲ್ಯೀಕರಣಗೊಳಿಸಿ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ** 1. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 2 ಟಿಎಫ್‌ಪಿ 2020, ದಿ:30.05.2020

2.ಸರ್ಕಾರದ ಆದೇಶ ಸಂಖ್ಯೆ:AGRI-AML-91-2020, ದಿನಾಂಕ: 02.06.2020.

3.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:18-10/2018-RFS-III, ದಿನಾಂಕ: 10.02.2020.

4. ಸರ್ಕಾರದ ಆದೇಶ ಸಂಖ್ಯೆ:ಕೃಇ 15 ಕೃಉಇ 2019, ದಿ:12.03.2020.

5.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 7/3/2020-RFS-III, ದಿನಾಂಕ: 15.04.2020.

6. ಜಲಾನಯನ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಲಅಇ/ ಉಕೃನಿ/ ಕೃಅ2/PMKSY/ರಾಕೇಪಾಅಬಿ/3/20-21, ದಿನಾಂಕ: 17.04.2020.

*****

ಪ್ರಸ್ತಾವನೆ:

2020-21ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (PMKSY)-ಜಲಾನಯನ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ: 2402-00-102-0-30 ಅಡಿ ಒಟ್ಟು ರೂ. 6600.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನಲ್ಲಿ ಜೂನ್ ರಿಂದ ನವೆಂಬರ್ ವರೆಗೆ 6 ತಿಂಗಳಿಗೆ ಹಣ ಬಿಡುಗಡೆ ಮಾಡಲು ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಯಿ (PMKSY)-ಜಲಾನಯನ ಅಭಿವೃದ್ಧಿ ಯೋಜನೆಯನ್ನು 2020-21ನೇ ಸಾಲಿಗೆ ಮುಂದುವರೆಸಲಾಗಿರುತ್ತದೆ.

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2019-20 ನೇ ಸಾಲಿಗೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (PMKSY-OI-PDMC) ಯೋಜನೆಗೆ ಕೇಂದ್ರ ಸರ್ಕಾರವು 2ನೇ ಕಂತಿನ ಅನುದಾನವಾಗಿ ರೂ. 4360.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ. ಸದರಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ರೂ.2906.6667 ಲಕ್ಷಗಳನ್ನು ಸೇರಿಸಿ ಒಟ್ಟು ರೂ.7266.668 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ.

ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2402-00-102-0-30ರಡಿ ಲಭ್ಯವಿದ್ದ ಅನುದಾನದಿಂದ ರೂ.3326.8903 ಲಕ್ಷಗಳನ್ನು ಮಾತ್ರ ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ (5)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-PDMC ಕಾರ್ಯಕ್ರಮದಡಿ ಬಿಡುಗಡೆಯಾಗಿ ವೆಚ್ಚ ಭರಿಸದೇ

P. [signature]

Scanned by CamScanner

ಉಳಿತಾಯವಾದ ಅನುದಾನವನ್ನು ಮರುಮೌಲ್ಯೀಕರಿಸಿ 2020-21ನೇ ಸಾಲಿನ ಕಾರ್ಯಕ್ರಮಗಳಿಗೆ ಬಳಸಲು ಅನುಮತಿ ನೀಡಲಾಗಿದೆ.

ಮೇಲೆ ಓದಲಾದ (6)ರ ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆಯಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-PDMC ಕಾರ್ಯಕ್ರಮದಡಿ 2019-20ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗದೇ ಬಾಕಿ ಇರುವ ಅನುದಾನ ರೂ.3939.7765 ಲಕ್ಷಗಳನ್ನು (ಕೇಂದ್ರದ ಪಾಲು ಮತ್ತು ರಾಜ್ಯದ ಪಾಲು) ಈ ಕೆಳಕಂಡಂತೆ 2020-21ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2402-00-102-0-30 ರಡಿಯ ಉಪ ಲೆಕ್ಕ ಶೀರ್ಷಿಕೆವಾರು ಬಿಡುಗಡೆ ಮಾಡಿ 2020-21ನೇ ಸಾಲಿನ ಅನುಮೋದಿತ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಳಸಲು ಅನುಮತಿ ನೀಡುವಂತೆ ಕೋರಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಉಪ ಶೀರ್ಷಿಕೆ | ಒಟ್ಟು |
|---|---|---|
| 1 | ಸಾಮಾನ್ಯ (139) | 2191.5234 |
| 2 | ಪರಿಶಿಷ್ಟ ಜಾತಿ (422) | 1242.6667 |
| 3 | ಗಿರಿಜನ ಉಪ ಯೋಜನೆ (423) | 505.5864 |
| ಒಟ್ಟು | | **3939.7765** |

ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 2 ಟಿಎಫ್‌ಪಿ 2020, ದಿ:30.05.2020ರಲ್ಲಿ 2020-21ನೇ ಸಾಲಿನಲ್ಲಿ ಜೂನ್ ರಿಂದ ನವೆಂಬರ್ ವರೆಗೆ 6 ತಿಂಗಳಿಗೆ ಹಣ ಬಿಡುಗಡೆ ಮಾಡಲು ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿರುತ್ತದೆ. ಅದರನ್ವಯ ಲೆಕ್ಕ ಶೀರ್ಷಿಕೆ: 2402-00-102-0-30ರಡಿ ಆಯವ್ಯದಲ್ಲಿ ಒದಗಿಸಿರುವ ರೂ.6600.00 ಲಕ್ಷ ಅನುದಾನದಲ್ಲಿ ರೂ.3300.00 ಲಕ್ಷಗಳನ್ನು ಮಾತ್ರ ಬಿಡುಗಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 19 ಕೃಉಇ 2020, ಬೆಂಗಳೂರು, ದಿನಾಂಕ: 17.06.2020.**

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (PMKSY-OI-PDMC) ಅಡಿ 2019-20ನೇ ಸಾಲಿನಲ್ಲಿ ಬಿಡುಗಡೆಗೆ ಬಾಕಿ ಉಳಿದಿದ್ದ, ಮರುಮೌಲ್ಯೀಕರಣಗೊಂಡ ಕೇಂದ್ರದ ಪಾಲಿನ ಅನುದಾನದೊಂದಿಗೆ ರಾಜ್ಯದ ಪಾಲಿನ ಅನುದಾನವನ್ನು ಸೇರಿಸಿ ಒಟ್ಟು **ರೂ. 2787.5234 ಲಕ್ಷಗಳನ್ನು (ಎರಡು ಸಾವಿರದ ಏಳು ನೂರ ಎಂಭತ್ತೇಳು ಲಕ್ಷದ ಐವತ್ತೆರಡು ಸಾವಿರದ ಮೂರು ನೂರ ನಲವತ್ತು ರೂಪಾಯಿಗಳು ಮಾತ್ರ)** 2020-21ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2402-00-102-0-30ರಡಿ ಈ ಕೆಳಕಂಡಂತೆ ಉಪ ಶೀರ್ಷಿಕೆವಾರು ಬಿಡುಗಡೆ ಮಾಡಿ, ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

P. S...

Scanned by CamScanner

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಉಪ ಶೀರ್ಷಿಕೆ | ಒಟ್ಟು |
|---|---|---|
| 1 | ಸಾಮಾನ್ಯ (139) | 2191.5234 |
| 2 | ಪರಿಶಿಷ್ಟ ಜಾತಿ (422) | 391.50 |
| 3 | ಗಿರಿಜನ ಉಪ ಯೋಜನೆ (423) | 204.50 |
| **ಒಟ್ಟು** | | **2787.5234** |

ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರು/ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/02/ಟಿಎಫ್ ಪಿ/2020, ದಿನಾಂಕ: 30.05.2020ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

P. Satya 17/6/2020
**(ಪಿ. ಸತ್ಯಭಾಮ)**
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.

Scanned by CamScanner